ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ರಾಜ್ಯದಲ್ಲಿ ಕ್ಯಾನ್ಸರ್, ಮಧುಮೇಹ, ಹೃದಯ ರಕ್ತನಾಳ ಮತ್ತು ಪಾಶ್ರ್ವವಾಯು ಕಾಯಿಲೆಗಳ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಯೋಜನೆ ಅನುಷ್ಠಾನ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು ):-

1412 (1750) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಸಹಯೋಗದಿಂದ ಕ್ಯಾನ್ಸರ್, ಮಧುಮೇಹ ಹೃದಯ ರಕ್ತನಾಳ ಮತ್ತು ಪಾಶ್ರ್ವವಾಯು ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣ (NPCDCS) ಯೋಜನೆ ಅಡಿಯಲ್ಲಿ ಆಯ್ದ ಜಿಲ್ಲೆಗಳಲ್ಲಿ ಈ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವಿಶ್ವ ಆರೋಗ್ಯ ಸಂಸ್ಥೆ ಇತ್ತೀಚಿನ ವರ್ಷಗಳ ಅಧ್ಯಯನಗಳ ಪ್ರಕಾರ ಭಾರತದಲ್ಲಿ ಈ ಮೇಲ್ಕಂಡ ಕಾಯಿಲೆಗಳಿಂದ ಶೇ.42 ರಷ್ಟು ಜನರು ಸಾವು-ನೋವುಗಳಿಗೆ ಬಲಿಯಾಗುತ್ತಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ವರದಿ ಪ್ರಕಾರ ರಾಜ್ಯದಲ್ಲಿ ಸದರಿ ಮೇಲ್ಕಂಡ ಕಾಯಿಲೆಗಳಿಂದ ಬಳಲುತ್ತಿರುವ ಜನರ ಸಂಖ್ಯೆ ಎಷ್ಟು ಮತ್ತು ಯಾವ ಯಾವ ಜಿಲ್ಲೆಗಳಲ್ಲಿ ಈ ಕಾಯಿಲೆಗಳು ಅತಿ ಹೆಚ್ಚಾಗಿ ಕಂಡು ಬರುತ್ತಿದೆ; (ಪೂರ್ಣ ಮಾಹಿತಿ ನೀಡುವುದು)

(ಇ) ಕೇಂದ್ರ ಸರ್ಕಾರದ ಮೇಲ್ಕಂಡ ಯೋಜನೆ ಅಡಿ ರಾಜ್ಯದಲ್ಲಿ ಈ ಕಾಯಿಲೆಗಳನ್ನು ತಡೆಗಟ್ಟಲು ಆಯ್ಕೆ ಹೊಂದಿರುವ ಜಿಲ್ಲೆಗಳು ಯಾವುವು; ಮತ್ತು ಈ ಜಿಲ್ಲೆಗಳಲ್ಲಿ ಈ ಕಾಯಿಲೆಗಳ ನಿಯಂತ್ರಣ ಮತ್ತು ತಡೆಗಟ್ಟುವಿಕೆಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಪ್ರಕಾರ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳೇನು ಮತ್ತು ಈ ಯೋಜನೆಗಳ ಅನುಷ್ಠಾನದಿಂದ ಬಂದಿರುವ ಫಲಿತಾಂಶಗಳೇನು;

(ಈ) ಈ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಯಾವ ಅನುಪಾತದ ಸಹಕಾರದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ಮತ್ತು ಇದುವರೆಗೂ ಎಷ್ಟು ಅನುದಾನ ಬಿಡುಗಡೆ ಆಗಿದೆ? (ಖರ್ಚು ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು)